ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಸಚಿವರು) :

ಅ) ಬಂದಿದೆ. ಈ ಹೆರಿಗೆ ಆಸ್ಪತ್ರೆಗೆ ಮಹಿಳಾ ವೈದ್ಯಾಧಿಕಾರಿ ಹುದ್ದೆ ಮಂಜೂರಾಗಿರುವುದಿಲ್ಲ.

ಆ) ಸಮೀಪದ ದೇಶನೂರುವಿನಲ್ಲಿ ಕೆಲಸ ನಿರ್ವಹಿಸುತ್ತಿರುವ ವೈದ್ಯಾಧಿಕಾರಿ ಇವರಿಗೆ ವಾರದಲ್ಲಿ (ಎರಡು ಮೂರು ದಿನ ಹೆರಿಗೆ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸಲು ತಿಳಿಸಲಾಗಿದೆ.

ಇ) ಸ್ಟಾಫ್ ನರ್ಸ್ ಹುದ್ದೆ ಮಂಜೂರಾಗಿ ಇರುವುದಿಲ್ಲ ಕಿರಿಯ ಮಹಿಳಾ ಆರೋಗ್ಯ ಸಹಾಯಕಿ ಹುದ್ದೆ ಮಂಜೂರಾಗಿರುತ್ತದೆ. ಹುದ್ದೆ ಖಾಲಿ ಇರುವುದಿಲ್ಲ.

ಈ) ಬಂದಿದೆ. ಇಲ್ಲಿಯವರೆಗೆ ತಾಲ್ಲೂಕು ಅಭಿವೃದ್ಧಿ ಮಂಡಳಿಯವರ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ದಿನಾಂಕ 1-7-87 ರಿಂದ ಇಲಾಖೆ ವಹಿಸಿಕೊಂಡು ತಾಲ್ಲೂಕು ಅಭಿವೃದ್ಧಿ ಮಂಡಳಿ ಕಟ್ಟಡದಲ್ಲಿ ಆಸ್ಪತ್ರೆಯ ಕೆಲಸವನ್ನು ನಿರ್ವಹಿಸುತ್ತಿದೆ.

ಉ) ಈ ಆಸ್ಪತ್ರೆಯಲ್ಲಿ ವೈದ್ಯರ ಹುದ್ದೆ ಮಂಜೂರಾತಿ ಆಗದೇ ಇರುವುದರಿಂದ ನೇಮಕಾತಿ ಮಾಡಿರುವುದಿಲ್ಲ. ಆದರೂ ಕೂಡಾ ಪ್ರಾಥಮಿಕ ಆರೋಗ್ಯ ಕೇಂದ್ರ, ದೇಶನೂರು ಆಸ್ಪತ್ರೆಯ ವೈದ್ಯಾಧಿಕಾರಿಗಳು ವಾರದಲ್ಲಿ 2-3 ದಿನ ಹಾಜರಾಗಿ ಬರುತ್ತಿದ್ದಾರೆ.

ಗೋಳಿಯಂಗಡಿಯಲ್ಲಿ ಪ್ರೌಢಶಾಲಾ ಶಿಕ್ಷಕರ ಕೊರತೆ ಕುರಿತು

1123 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ಕ್ಷೇತ್ರದ ಗೋಳಿಯಂಗಡಿ ಪ್ರೌಢಶಾಲೆಯಲ್ಲಿ ಮಂಜೂರಾದ ಶಿಕ್ಷಕರ ಸಂಖ್ಯೆ ಎಷ್ಟು (ಹುದ್ದೆವಾರು ವಿವರ)?

ಆ) ಹಾಗಿದಲ್ಲಿ ಕೊರತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು (ಹುದ್ದೆವಾರು ವಿವರ ನೀಡುವುದು)?

ಇ) ಈ ಕೊರತೆಯನ್ನು ಯಾವಾಗ ತುಂಬಲಾಗುವುದು.

ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ ಸಚಿವರು):

ಅ) ಈ ಶಿಕ್ಷಣ ಸಂಸ್ಥೆಯ ಸಂಯುಕ್ತ ಸರ್ಕಾರಿ ಕಿರಿಯ ಕಾಲೇಜು ಆಗಿರುತ್ತದೆ. ಇದರ ಪ್ರೌಢಶಾಲಾ ವಿಭಾಗದಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳು - 7

1.	ಸಹ ಶಿಕ್ಷಕರು	6
2.	ದೈಹಿಕ ಶಿಕ್ಷಕರು	1
	ಒಟ್ಟು	7

ಆ) ಪ್ರೌಢಶಾಲಾ ವಿಭಾಗದಲ್ಲಿ ಶಿಕ್ಷಕರ ಕೊರತೆ ಇರುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಕೋಟೇಶ್ವರ ಪದವೀಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ

1124 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕಿನ ಕೋಟೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ಮಂಜೂರಾದ ಉಪನ್ಯಾಸಕರುಗಳ ಸಂಖ್ಯೆ ಎಷ್ಟು?

ಆ) ಆವುಗಳಲ್ಲಿ ಈಗ ಕೊರತೆ ಇರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು; ಹುದ್ದೆವಾರು ವಿವರ)?

ಇ) *ಈ ಕೊರತೆಯನ್ನು ಯಾವಾಗ ತುಂಬಲಾಗುವುದು?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :

ಅ) ಸರ್ಕಾರಿ ಪದವಿಪೂರ್ವ ಕಾಲೇಜು ಕೋಟೇಶ್ವರಕ್ಕೆ ಮಂಜೂರಾದ ಉಪನ್ಯಾಸಕರ ಹುದ್ದೆಗಳು - 11.

ಆ) ಕೋಟೇಶ್ವರ ಕಾಲೇಜಿನಲ್ಲಿ ಅರ್ಥಶಾಸ್ತ್ರ ಉಪನ್ಯಾಸಕರ ಹುದ್ದೆ ಖಾಲಿ ಇರುತ್ತದೆ.

ಇ) ಉಪನ್ಯಾಸಕರುಗಳ ಹುದ್ದೆ ಎಸ್.ಎಲ್.ಆರ್.ಸಿ.ಯು ಆಯ್ಕೆ ಮಾಡಿದ ಅಭ್ಯರ್ಥಿಗಳ ಪಟ್ಟಿಯನ್ನು ದಿನಾಂಕ 21-1-1991 ರಂದು ರಾಜ್ಯ ಪತ್ರದಲ್ಲಿ ಪ್ರಕಟಿಸಿದ್ದು, ನೇಮಕಾತಿ ಪೂರ್ವಭಾವಿ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಶಂಕರನಾರಾಯಣ ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ

1125 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕುಂದಾಪುರ ತಾಲ್ಲೂಕಿನ ಶಂಕರನಾರಾಯಣ ಪದವಿ ಪೂರ್ವ ಕಾಲೇಜಿಗೆ ಮಂಜೂರಾದ ಉಪನ್ಯಾಸಕರುಗಳ ಸಂಖ್ಯೆ ಎಷ್ಟು?*

ಆ) *ಈಗ ಕೊರತೆ ಇರುವ ಉಪನ್ಯಾಸಕರ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು)?*

ಇ) *ಈ ಕೊರತೆಯನ್ನು ಯಾವಾಗ ತುಂಬಲಾಗುವುದು?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):

ಅ) ಸರ್ಕಾರಿ ಪದವಿ ಪೂರ್ವ ಕಾಲೇಜು, ಶಂಕರನಾರಾಯಣಪುರ ಇಲ್ಲಿ 10 ಉಪನ್ಯಾಸಕರುಗಳ ಹುದ್ದೆಗಳು ಮಂಜೂರಾಗಿರುತ್ತವೆ.

ಆ) ಈಗ ಈ ಕಾಲೇಜಿನಲ್ಲಿ, ವಾಣಿಜ್ಯ ಶಾಸ್ತ್ರ ಉಪನ್ಯಾಸಕರ ಒಂದು ಹುದ್ದೆ ಖಾಲಿ ಇರುತ್ತದೆ.

ಇ) ಈ ಕೊರತೆಯನ್ನು ಈಗಾಗಲೇ ಆಯ್ಕೆಯಾಗಿರುವ ಎಸ್ ಎಲ್ ಆರ್ ಸಿ ಪಟ್ಟಿಯಿಂದ ತುಂಬಲಾಗುವುದು.

ಕುಂದಾಪುರ ಸಾರ್ವಜನಿಕ ಆಸ್ಪತ್ರೆಗೆ ಆ್ಯಂಬುಲೆನ್ಸ್ ಒದಗಿಸುವುದು.

1126 - ಶ್ರೀ ಕೆ. ಪ್ರತಾಪ ಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕುಂದಾಪುರ ಸಾರ್ವಜನಿಕ ಆಸ್ಪತ್ರೆಯಲ್ಲಿ ಆ್ಯಂಬುಲೆನ್ಸ್ ಸೌಲಭ್ಯವಿಲ್ಲದೆ ಈ ತಾಲ್ಲೂಕಿನ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಇದ್ದಲ್ಲಿ ಯಾವಾಗ ಈ ಆ್ಯಂಬುಲೆನ್ಸ್‌ನ್ನು ಒದಗಿಸಲಾಗುವುದು?*

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.